ಕರ್ನಾಟಕ ಸರ್ಕಾರ

# ಪದವಿ ಪೂರ್ವ ಶಿಕ್ಷಣ ಇಲಾಖೆ

**ನಿರ್ದೇಶಕರ ಕಛೇರಿ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12**

---

ಸಂಖ್ಯೆ: ಪಮೂಶಿಇ/ಪರೀಕ್ಷೆ/ವಾ.ಪ.ಮ.ಅ/2021-22 ದಿನಾಂಕ : 30-10-2021

## : ಸುತ್ತೋಲೆ :

**ವಿಷಯ** : 2021-22ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗೆ ಪುನರಾವರ್ತಿತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ.

* * * *

2021-22ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗೆ ಪುನರಾವರ್ತಿತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಈ ಕೆಳಕಂಡಂತೆ ದಿನಾಂಕ ನಿಗಧಿಪಡಿಸಲಾಗಿದ್ದು, ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಈ ಸುತ್ತೋಲೆಯನ್ನು ಕಡ್ಡಾಯವಾಗಿ ನಿಮ್ಮ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವುದರ ಜೊತೆಗೆ ಅನುತ್ತೀರ್ಣ ವಿದ್ಯಾರ್ಥಿಗಳ ಗಮನಕ್ಕೆ ತಂದು ಶುಲ್ಕ ಪಾವತಿಸಲು ಕ್ರಮವಹಿಸುವುದು.

1. ಆಗಸ್ಟ್-ಸೆಪ್ಟೆಂಬರ್ 2021ರ ದ್ವಿತೀಯ ಪಿಯುಸಿ ಪರೀಕ್ಷೆಯ ಹಾಗೂ ಅದರ ಹಿಂದಿನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮೂಲ ಅನುತ್ತೀರ್ಣ ಅರ್ಜಿ ಅಥವಾ ಹಿಂದಿನ ಎಂ.ಸಿ.ಎ **(Marks Card Cum Application)** ಗಳ ಆಧಾರದ ಮೇಲೆ ಪರೀಕ್ಷಾ ಶುಲ್ಕಗಳನ್ನು ಕಟ್ಟಿಸಿಕೊಂಡು ಇಲಾಖಾ **Online Portal** ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ತುಂಬುವುದು.

2. ಸೆಪ್ಟೆಂಬರ್ 2020ರ ಫಲಿತಾಂಶದಲ್ಲಿ ಹಾಗೂ 2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು ಫಲಿತಾಂಶ ತಿರಸ್ಕರಿಸಿ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಬರೆಯಲು ಇಚ್ಛಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳು ಮೂಲ ಅಂಕಪಟ್ಟಿಗಳ **(Original Marks Card)** ಆಧಾರದ ಮೇಲೆ ನಿಯಮಾನುಸಾರ ಫಲಿತಾಂಶ ತಿರಸ್ಕರಣೆಗೆ ಅವಕಾಶ ನೀಡಲು ಅರ್ಜಿಯನ್ನು ಇಲಾಖೆಗೆ ಸಲ್ಲಿಸುವುದು. ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳ ಮಾಹಿತಿಗಳನ್ನು **Online Portal** ನಲ್ಲಿ ದಾಖಲಿಸುವುದು.

3. ಸರ್ಕಾರದ ಆದೇಶ ಸಂಖ್ಯೆ ಇಡಿ 195 ಡಿಜಿಡಿ 2017 ಬೆಂಗಳೂರು, ದಿನಾಂಕ 20/03/2018 ರಂತೆ ಪರೀಕ್ಷಾ ಶುಲ್ಕ ಹಾಗೂ ಫಲಿತಾಂಶ ತಿರಸ್ಕರಣಾ ಶುಲ್ಕ ಹಾಗೂ ದಂಡ ಶುಲ್ಕಗಳನ್ನು ಪರಿಷ್ಕರಿಸಿದೆ.

**2021–22 ರ ಸಾಲಿನಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕಗಳ ವಿವರ :**

| ಪರೀಕ್ಷಾ ಶುಲ್ಕ (ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ–1ರ ವಿದ್ಯಾರ್ಥಿಗಳನ್ನು ಹೊರತು ಪಡಿಸಿ) | |
|---|---|
| ಒಂದು ವಿಷಯಕ್ಕೆ | ರೂ. 140/– |
| ಎರಡು ವಿಷಯಕ್ಕೆ | ರೂ. 270/– |
| ಮೂರು ಅಥವಾ ಹೆಚ್ಚಿನ ವಿಷಯಗಳು | ರೂ. 400/– |
| ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗ ಹಾಗೂ ಪ್ರವರ್ಗ–1 ರ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ವಿದ್ಯಾರ್ಥಿ / ವಿದ್ಯಾರ್ಥಿನಿಯರು ಕಡ್ಡಾಯವಾಗಿ ಪಾವತಿಸಬೇಕಾದ ಅಂಕಪಟ್ಟಿ ಶುಲ್ಕ | ರೂ. 50/– |

| ಫಲಿತಾಂಶ ತಿರಸ್ಕರಣಾ ಶುಲ್ಕ | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/– |
| ದ್ವಿತೀಯ ಹಾಗೂ ಅಂತಿಮ ಬಾರಿಗೆ ಒಂದು ವಿಷಯಕ್ಕೆ | ರೂ 350/– |

**2022ರಲ್ಲಿ ನಡೆಸುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ನಿಗಧಿಪಡಿಸಿರುವ ದಿನಾಂಕಗಳು:**

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ (ಅನುತ್ತೀರ್ಣ ಮತ್ತು ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು) Online Portal ನಲ್ಲಿ Update ಮಾಡಲು ಕಡೇ ದಿನಾಂಕ | | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|---|
| **ದಂಡ ರಹಿತ** | 02/11/2021 ರಿಂದ 27/11/2021 | 29/11/2021 | 01/12/2021 |
| **ದಂಡ ಸಹಿತ ದಿನಕ್ಕೆ ರೂ.50 ರಂತೆ ಕಾರ್ಯನಿರತ 10 ದಿನಗಳಿಗೆ ಗರಿಷ್ಠ–500 ರೂ.ಗಳು** | 29/11/2021 ರಿಂದ 09/12/2021 | 10/12/2021 | 13/12/2021 |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು **Online Portal** ನಲ್ಲಿ **Update** ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು ಪ್ರಾಂಶುಪಾಲರಿಂದ **Update** ಮಾಡಿರುವುದಕ್ಕೆ ಸಂಬಂಧಿಸಿದಂತೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ಕೆಳಗೆ ತಿಳಿಸಿದ ವೇಳಾಪಟ್ಟಿಯಂತೆ ಕೇಂದ್ರ ಕಛೇರಿಗೆ ಕಡ್ಡಾಯವಾಗಿ ಈ ಕೆಳಕಂಡ ದಿನಾಂಕಗಳಂದು ಸಲ್ಲಿಸಬೇಕು.

| ಅರ್ಜಿಗಳ ವಿವರ | ಜಿಲ್ಲಾ ಉಪ ನಿರ್ದೇಶಕರು, ಅರ್ಜಿಗಳನ್ನು ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ |
|---|---|
| ದಿನಾಂಕ : 01-12-2021 ರಂದು ಸ್ವೀಕರಿಸಿದ ದಂಡ ರಹಿತ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕೃತ ವಿದ್ಯಾರ್ಥಿಗಳ ಅರ್ಜಿಗಳು | 03-12-2021 |
| ದಿನಾಂಕ : 13-12-2021 ರಂದು ಸ್ವೀಕರಿಸಿದ ದಂಡ ಸಹಿತ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕೃತ ವಿದ್ಯಾರ್ಥಿಗಳ ಅರ್ಜಿಗಳು | 15-12-2021 |

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ಮಾಹಿತಿ ನೀಡಲು ಸೂಚಿಸಿದೆ.)
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಪದವಿ ಪೂರ್ವ ಶಿಕ್ಷಣ ಇಲಾಖೆ.
4. ಗಣಕ ಶಾಖೆ.
5. ಇ-ಆಡಳಿತ ಶಾಖೆ, (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
6. ಹೆಚ್ಚುವರಿ / ಕಛೇರಿ ಪ್ರತಿ.